# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 803 |
| 2 | ಸದಸ್ಯರ ಹೆಸರು | : | ಶ್ರೀ ಎಂ.ಎಲ್.ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| 3 | ಉತ್ತರಿಸಬೇಕಾದ ದಿನಾಂಕ | : | 13.03.2025 |
| 4 | ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಪ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರು ನಗರದಲ್ಲಿ ಎಎಸ್‌ಐ ಹುದ್ದೆಯಿಂದ ಪಿಎಸ್‌ಐ ಹುದ್ದೆಗೆ ಮುಂಬಡ್ತಿ ನೀಡಲು ಬಾಕಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು; (ಸಂಪೂರ್ಣವಾದ ಮಾಹಿತಿ ನೀಡುವುದು) | ಪ್ರಸ್ತುತ ಬೆಂಗಳೂರು ನಗರ ಘಟಕದಲ್ಲಿ ಎಎಸ್‌ಐ ಹುದ್ದೆಯಿಂದ ಪಿಎಸ್‌ಐ ಹುದ್ದೆಗೆ ಮುಂಬಡ್ತಿ ನೀಡಲು ಹುದ್ದೆಗಳು ಖಾಲಿ ಇರುವುದಿಲ್ಲ. |
| (ಆ) | ರಾಜ್ಯದಲ್ಲಿ ಬೇರೆ ಬೇರೆ ಸರ್ಕಾರಿ ಇಲಾಖೆಯಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಹುದ್ದೆಗಳು ಶೇಕಡ 50/50 ರಷ್ಟು ಇದ್ದು ಪೊಲೀಸ್ ಇಲಾಖೆಯಲ್ಲಿ ಮಾತ್ರ 70/30ರಷ್ಟಿದ್ದು ಈ ತಾರತಮ್ಯವನ್ನು ಸರಿಪಡಿಸಲು ಸರ್ಕಾರ ಚಿಂತಿಸಿದೆಯೇ; ಇಲ್ಲದಿದ್ದಲ್ಲಿ ಈ ತಾರತಮ್ಯವನ್ನು ಸರಿಪಡಿಸುವಲ್ಲಿ ಸರ್ಕಾರವು ಯಾವ ಕ್ರಮ ಕೈಗೊಳ್ಳಲಿದೆ; ಯಾವ ಕಾಲಮಿತಿಯೊಳಗೆ ಈ ತಾರತಮ್ಯವನ್ನು ಸರಿಪಡಿಸಲಾಗುವುದು; | ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಪಿಎಸ್‌ಐ ಹುದ್ದೆಗೆ ನೇರ ನೇಮಕಾತಿ ಮತ್ತು ಮುಂಬಡ್ತಿಗೆ ಶೇಕಡಾ 70:30ರ ಅನುಪಾತವನ್ನು ನಿಗದಿಪಡಿಸಲಾಗಿರುತ್ತದೆ. ಸದರಿ ಅನುಪಾತ ನಿಗದಿಯು ಇಲಾಖೆಯ ಕಾರ್ಯನಿರ್ವಹಣೆಗೆ ಮತ್ತು ಆಡಳಿತಕ್ಕೆ ಪೂರಕವಾಗಿರುತ್ತದೆ. |
| (ಇ) | ಅಗ್ನಿಶಾಮಕ ಮತ್ತು ಕಾರಾಗೃಹ ಇಲಾಖೆಯಲ್ಲಿ ಎಎಸ್‌ಐ ಮತ್ತು ಪಿಎಸ್‌ಐ ವಾರ್ಷಿಕ ಗೆಜೆಟೆಡ್ 30 ದಿನಗಳ ವೇತನವನ್ನು ಪಡೆಯುತ್ತಿದ್ದು ಪೊಲೀಸ್ ಇಲಾಖೆಯಲ್ಲಿ ಎಎಸ್‌ಐ ಮತ್ತು ಪಿಎಸ್‌ಐ ಗೆಜೆಟೆಡ್ 15 ದಿನಗಳ ವೇತನವನ್ನು ಪಡೆಯುತ್ತಿದ್ದು; ಸಾರ್ವಜನಿಕರಿಗೆ ಹೆಚ್ಚು ಹತ್ತಿರವಾಗಿ ಕಾರ್ಯನಿರ್ವಹಿಸುತ್ತಿರುವ ಪೊಲೀಸ್ ಇಲಾಖೆ ಗೆಜೆಟೆಡ್ 30 ದಿನಗಳ ವೇತನವನ್ನು ನೀಡಲು ಸರ್ಕಾರ ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು? (ಸಂಪೂರ್ಣವಾದ ಮಾಹಿತಿ ನೀಡುವುದು) | ಪ್ರಸ್ತುತ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಯ ಕೆಲವು ನಿರ್ದಿಷ್ಟ ವೃಂದದ ಸಿಬ್ಬಂದಿಗಳನ್ನೂ ಒಳಗೊಂಡಂತೆ ಪೊಲೀಸ್ ಇಲಾಖೆಯ ಪೊಲೀಸ್ ಕಾನ್ಸ್ ಟೇಬಲ್ ಮತ್ತು ಹೆಡ್ ಕಾನ್ಸ್ ಟೇಬಲ್ ವೃಂದದ ಸಿಬ್ಬಂದಿಗಳಿಗೆ ಅವರು ಪತ್ರಾಂಕಿತ ರಜಾ ದಿವಸಗಳಲ್ಲಿ ಕಾರ್ಯನಿರ್ವಹಿಸಿದ್ದಕ್ಕಾಗಿ 30 ದಿನಗಳ ಹೆಚ್ಚುವರಿ ವೇತನವನ್ನು ಪಾವತಿಸಲು ಅವಕಾಶವಿರುತ್ತದೆ.<br><br>ಪೊಲೀಸ್ ಇಲಾಖೆಯ ಸಿಬ್ಬಂದಿಗಳಿಗೆ ಲಭ್ಯವಿರುವ ಪತ್ರಾಂಕಿತ ರಜಾ ವೇತನದ ಸೌಲಭ್ಯವೂ ಸೇರಿದಂತೆ ಸರ್ಕಾರಿ ನೌಕರರ ವಿಶೇಷ ಭತ್ಯೆಯ ಪರಿಷ್ಕರಣೆಯು ಸರ್ಕಾರದ ನೀತಿ ನಿರ್ಣಯಕ್ಕೆ ಸಂಬಂಧಿಸಿರುತ್ತದೆ.<br><br>ಪೊಲೀಸ್ ಇಲಾಖೆಯ ಎ.ಎಸ್.ಐ ಮತ್ತು ಪಿ.ಎಸ್.ಐ ವೃಂದದ ಸಿಬ್ಬಂದಿಗಳು ಪತ್ರಾಂಕಿತ ರಜಾ ದಿವಸಗಳಲ್ಲಿ ಕಾರ್ಯನಿರ್ವಹಿಸಿದ್ದಕ್ಕಾಗಿ ಪ್ರಸ್ತುತ ಲಭ್ಯವಿರುವ 15 ದಿವಸಗಳ ವೇತನವನ್ನು 30 ದಿವಸಗಳ ವೇತನಕ್ಕೆ ಪರಿಷ್ಕರಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ. |

ಸಂಖ್ಯೆ: ಒಇ 60 ಪಿಇಐ 2025

(ಡಾ. ಜಿ. ಪರಮೇಶ್ವರ)
ಗೃಹ ಸಚಿವರು